# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1346 |
| ಸದಸ್ಯರ ಹೆಸರು | ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 22-08-2025 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ರೈತರಿಗೆ ರಸಗೊಬ್ಬರ, ಬಿತ್ತನೆ ಬೀಜ ಹಾಗೂ ಕೀಟನಾಶಗಳ ಕೊರತೆ ಕಂಡುಬಂದಿರುವುದು ಹಾಗೂ ಕಾಳಸಂತೆಯಲ್ಲಿ ಅಕ್ರಮವಾಗಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಕೆಲವು ಜಿಲ್ಲೆಗಳಲ್ಲಿ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರದ ಕೊರತೆ ಕಂಡುಬಂದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ ಮತ್ತು ಕಾಳಸಂತೆಯಲ್ಲಿ ಅಕ್ರಮವಾಗಿ ರಸಗೊಬ್ಬರ ಮಾರಾಟವಾಗುತ್ತಿರುವ ಕೆಲ ಪ್ರಕರಣಗಳು ವರದಿಯಾಗಿರುತ್ತವೆ.<br>ಕೀಟನಾಶಕ ಮತ್ತು ಬಿತ್ತನೆ ಬೀಜಗಳಿಗೆ ಸಂಬಂಧಿಸಿದಂತೆ ಯಾವುದೆ ಕೊರತೆ ಹಾಗೂ ಕಾಳಸಂತೆಯಲ್ಲಿ ಅಕ್ರಮವಾಗಿ ಮಾರಾಟವಾಗುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| (ಆ) | ಕಾಳಸಂತೆಯಲ್ಲಿ ರಸಗೊಬ್ಬರ, ಬಿತ್ತನೆ ಬೀಜ ಹಾಗೂ ಕೀಟನಾಶಕಗಳನ್ನು ಮಾರಾಟ ಮಾಡುವುದನ್ನು ಮತ್ತು ಮಾರಾಟ ಮಾಡುವವರ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ; | ಕೇಂದ್ರ ಸರ್ಕಾರ ರೂಪಿಸಿರುವ ರಸಗೊಬ್ಬರ (ನಿಯಂತ್ರಣ) ಆದೇಶ, 1985, ಬೀಜ ಕಾಯ್ದೆಗಳು (ಬೀಜ ಕಾಯ್ದೆ, 1966, ಬೀಜ ಅಧಿನಿಯಮ, 1968 ಮತ್ತು ಬೀಜ ನಿಯಂತ್ರಣ ಆದೇಶ 1983) ಮತ್ತು ಕೀಟನಾಶಕ ಕಾಯ್ದೆ 1968 ಮತ್ತು ಕೀಟನಾಶಕ ನಿಯಮ, 1971 ಜಾರಿಯಲ್ಲಿದ್ದು, ಸದರಿ ಆದೇಶ ನಿಯಮ ಕಾಯಿದೆಗಳನ್ವಯ ರಸಗೊಬ್ಬರ/ಬೀಜ/ಕೀಟನಾಶಕ ಪರಿವೀಕ್ಷಕರುಗಳನ್ನು ಅಧಿಸೂಚಿಸಲಾಗಿರುತ್ತದೆ ಹಾಗೂ ಅಪರ ಕೃಷಿ ನಿರ್ದೇಶಕರು(ಜಾಗೃತ ಕೋಶ) ರವರ ನೇತೃತ್ವದಲ್ಲಿ ಜಾಗೃತ ಕೋಶ ಸೃಜಿಸಲಾಗಿದೆ ಮತ್ತು ಇವರ ಅಧೀನದಲ್ಲಿ ರಾಜ್ಯದ 4 ಕಂದಾಯ ವಿಭಾಗಗಳಲ್ಲಿ (ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ) ಜಂಟಿ ಕೃಷಿ ನಿರ್ದೇಶಕರು (ಜಾಗೃತ ಕೋಶ) ಕಾರ್ಯನಿರ್ವಹಿಸುತ್ತಿದ್ದಾರೆ. ಜಾಗೃತಕೋಶದ ಅಧಿಕಾರಿಗಳು, ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಕೃಷಿ ನಿರ್ದೇಶಕರು(ಜಾರಿದಳ) ಮತ್ತು ಅಧಿಸೂಚಿಸಿರುವ ರಸಗೊಬ್ಬರ/ಬೀಜ/ಕೀಟನಾಶಕ ಪರಿವೀಕ್ಷಕರು, ದೂರುಗಳನ್ನು ಆಧರಿಸಿ/ಅನಿರೀಕ್ಷಿತವಾಗಿ/ಆಗಿಂದ್ದಾಗ್ಗೆ |

| | | |
|---|---|---|
| | | ಅವರ ವ್ಯಾಪ್ತಿಯಲ್ಲಿ ಬರುವ ವಿವಿಧ ಕೃಷಿ ಪರಿಕರ ಮಾರಾಟ ಮಳಿಗೆ/ಉತ್ಪಾದನಾ ಘಟಕ/ಗೋದಾಮುಗಳಿಗೆ ಭೇಟಿ ನೀಡಿ ಪರಿಶಿಲನೆಯನ್ನು ಕೈಗೊಂಡು ವಿವಿಧ ಪರಿಕರಗಳನ್ನು ಅಕ್ರಮವಾಗಿ ದಾಸ್ತಾನು/ ಸಾಗಾಣಿಕೆ ಮಾಡಿ ಕೃತಕ ಅಭಾವ ಸೃಷ್ಟಿಸಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಕಂಡು ಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಸೂಕ್ತ ಆದೇಶ, ನಿಯಮ ಮತ್ತು ಕಾಯಿದೆಗಳನ್ವಯ ಕ್ರಮ ಕೈಗೊಳ್ಳುತ್ತಿದ್ದಾರೆ.<br><br>ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಅಕ್ರಮವಾಗಿ ರಸಗೊಬ್ಬರ ದಾಸ್ತಾನು ಮಾಡಿ ಕಾಳಸಂತೆಯಲ್ಲಿ ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದವರ ಮೇಲೆ ದಾಳಿ ಮಾಡಿ 17 ಪ್ರಕರಣಗಳನ್ನು ದಾಖಲಿಸಲಾಗಿದೆ. ಸದರಿ ಪ್ರಕರಣಗಳಲ್ಲಿ ರೂ.54.30 ಲಕ್ಷ ಮೌಲ್ಯದ 218.929 ಮೆ.ಟನ್ ವಿವಿಧ ಗ್ರೇಡ್‌ನ ರಸಗೊಬ್ಬರಗಳನ್ನು ವಶಪಡಿಸಿಕೊಳ್ಳಲಾಗಿದೆ.<br><br>ಸದರಿ ಪ್ರಕರಣಗಳ ಪೈಕಿ 7 ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ಮೊಕದ್ದಮೆ/ಎಫ್.ಐ.ಆರ್ ಗಳನ್ನು ಹೂಡಲಾಗಿದೆ. ಇನ್ನುಳಿದ 10 ಪ್ರಕರಣಗಳಿಗೆ ಸಂಬಂಧಿಸಿದಂತೆ ಮೊಕದ್ದಮೆ ಹೂಡುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| (ಇ) | ರಾಜ್ಯದ ರೈತರಿಗೆ ನಕಲಿ ಅಥವಾ ಕಳಪೆ ಗುಣಮಟ್ಟದ ರಸಗೊಬ್ಬರ, ಬಿತ್ತನೆ ಬೀಜ ಹಾಗೂ ಕೀಟನಾಶಕವು ಪೂರೈಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದ ರೈತರಿಗೆ ನಕಲಿ ಅಥವಾ ಕಳಪೆ ಗುಣಮಟ್ಟದ ರಸಗೊಬ್ಬರ, ಬಿತ್ತನೆ ಬೀಜ ಹಾಗೂ ಕೀಟನಾಶಕ ಕಾಯ್ದೆಯಡಿ ನೋಂದಣಿಯಾದ ಪೀಡೆನಾಶಕಗಳನ್ನು ಜೈವಿಕ ಹೆಸರಿನ ಉತ್ಪನ್ನಗಳಲ್ಲಿ ಮಿಶ್ರಣ ಮಾಡಿ ನಕಲಿ ಜೈವಿಕ ಹೆಸರಿನಡಿ ಮಾರಾಟ ಮಾಡುತ್ತಿರುವ ಕೆಲವು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>• ಪ್ರಸಕ್ತ ಸಾಲಿನಲ್ಲಿ (ಜುಲೈ ಮಾಹೆಯ ಅಂತ್ಯಕ್ಕೆ) ರಸಗೊಬ್ಬರಕ್ಕೆ ಸಂಬಂಧಿಸಿದಂತೆ ನಕಲಿ ಅಥವಾ ಕಳಪೆ ಗುಣಮಟ್ಟದ ರಸಗೊಬ್ಬರ ಮಾರಾಟ ಮಾಡುತ್ತಿರುವವರ ವಿರುದ್ಧ 03 FIR ಹಾಗೂ 02 ಮೊಕದ್ದಮೆಯನ್ನು ಸಂಬಂಧಪಟ್ಟ ನ್ಯಾಯಾಲಯದಲ್ಲಿ ಹೂಡಲಾಗಿರುತ್ತದೆ.<br>• ಬಿತ್ತನೆ ಬೀಜಕ್ಕೆ ಸಂಬಂಧಿಸಿದಂತೆ (ಜುಲೈ ಮಾಹೆಯ ಅಂತ್ಯಕ್ಕೆ) 69 ಮಾದರಿಗಳು ಕಳಪೆ ಎಂದು ವರದಿಯಾಗಿದ್ದು, ಸಂಬಂಧಪಟ್ಟ ಬೀಜ ವಿತರಕರು /ಮಾರಾಟಗಾರರ ವಿರುದ್ಧ ಬೀಜ ಕಾಯ್ದೆ 1966 ರನ್ವಯ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br>• ಪೀಡೆನಾಶಕ ಸಂಬಂಧಿಸಿದಂತೆ ಪ್ರಸಕ್ತ ಸಾಲಿನಲ್ಲಿ 52 |

| | | |
|---|---|---|
| | | ಮಾದರಿಗಳು ಕಳಪೆ ಎಂದು ವರದಿಯಾಗಿದ್ದು, ಸದರಿ ಮಾದರಿಗಳು ಮರುವಿಶ್ಲೇಷಣೆಯಲ್ಲೂ ಕಳಪೆ ಎಂದು ವರದಿಯಾದಲ್ಲಿ ಕೀಟನಾಶಕ ಕಾಯ್ದೆ ಮತ್ತು ನಿಯಮಗಳನ್ವಯ ಕ್ರಮ ವಹಿಸಲಾಗುವುದು. ಅಲ್ಲದೆ ಜೈವಿಕ ಹೆಸರಿನ ಉತ್ಪನ್ನಗಳಲ್ಲಿ ರಾಸಾಯನಿಕ ಪೀಡೆನಾಶಕಗಳನ್ನು ಮಿಶ್ರಣ ಮಾಡಿರುವ 01 ಪ್ರಕರಣ ಕಂಡು ಬಂದಿದ್ದು ಕೀಟನಾಶಕ ಕಾಯ್ದೆ ಮತ್ತು ನಿಯಮಗಳ ಉಲ್ಲಂಘನೆ ವಿರುದ್ಧ ನ್ಯಾಯಾಲಯದಲ್ಲಿ ಮೊಕದ್ದಮೆಯನ್ನು ದಾಖಲಿಸಲಾಗಿರುತ್ತದೆ. |
| (ಈ) | ರಾಜ್ಯದ ರೈತರಿಗೆ ಸಮರ್ಪಕ ರಸಗೊಬ್ಬರ, ಬಿತ್ತನೆ ಬೀಜ ಹಾಗೂ ಕೀಟನಾಶಕ ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | **ರಸಗೊಬ್ಬರ:**<br>ಹಂಗಾಮಿನ ಪೂರ್ವದಲ್ಲಿಯೇ ಜಿಲ್ಲೆಗಳಲ್ಲಿ ಆವರಿಸಬಹುದಾದ ಬೆಳೆಗಳ ವಿಸ್ತೀರ್ಣದ ಆಧಾರದ ಮೇಲೆ ರಸಗೊಬ್ಬರದ ಬೇಡಿಕೆಯನ್ನು ಅಂದಾಜಿಸಿ ಕೇಂದ್ರ ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಲಾಗುತ್ತದೆ. ಕೇಂದ್ರ ಸರ್ಕಾರದಿಂದ ಮಾಹೆವಾರು ಹಂಚಿಕೆ ಮಾಡಲಾಗುವ ವಿವಿಧ ರಸಗೊಬ್ಬರಗಳನ್ನು ಜಿಲ್ಲಾವಾರು ಬೇಡಿಕೆಗನುಗುಣವಾಗಿ ನಿಗಧಿಪಡಿಸಿ, ರಸಗೊಬ್ಬರ ತಯಾರಿಕಾ ಸಂಸ್ಥೆಯವರಿಂದ ನೇರವಾಗಿ ಸಹಕಾರ ಸಂಘಗಳು ಹಾಗು ಪರವಾನಗಿ ಹೊಂದಿರುವ ಖಾಸಗಿ ಮಾರಾಟಗಾರರ ಮುಖಾಂತರ ಸಮರ್ಪಕ ರೀತಿಯಲ್ಲಿ ರೈತರಿಗೆ ವಿತರಿಸಲಾಗುತ್ತಿದೆ.<br><br>ರಾಜ್ಯದಲ್ಲಿ ಹಂಚಿಕೆ/ಬೇಡಿಕೆಗನುಗುಣವಾಗಿ ಕೇಂದ್ರ ಸರ್ಕಾರದಿಂದ ಯೂರಿಯಾ ರಸಗೊಬ್ಬರವು ಸರಬರಾಜಾಗದ ಕಾರಣ ಕೆಲವು ಜಿಲ್ಲೆಗಳಲ್ಲಿ ಕೊರತೆಯಾಗಿರುತ್ತದೆ. ಪ್ರಸ್ತುತ ಸಾಲಿನಲ್ಲಿ ಏಪ್ರಿಲ್ ರಿಂದ ಆಗಸ್ಟ್-2025ರ ವರೆಗೆ ಕೇಂದ್ರ ಸರ್ಕಾರದಿಂದ 9.05 ಲಕ್ಷ ಮೆ.ಟನ್ ಪ್ರಮಾಣದ ಯೂರಿಯಾ ರಸಗೊಬ್ಬರದ ಹಂಚಿಕೆಗೆ 18.08.2025ರಂತೆ 6.54 ಲಕ್ಷ ಮೆ.ಟನ್ ಸರಬರಾಜಾಗಿದ್ದು, 2.51 ಲಕ್ಷ ಮೆ.ಟನ್ ಸರಬರಾಜಿಗೆ ಬಾಕಿ ಇರುತ್ತದೆ.<br><br>ರಸಗೊಬ್ಬರದ ಕೊರತೆಯನ್ನು ನೀಗಿಸಲು ಕೈಗೊಂಡಿರುವ ಕ್ರಮಗಳು:<br>• ಸನ್ಮಾನ್ಯ ಮುಖ್ಯಮಂತ್ರಿಯವರಿಂದ ರಾಜ್ಯದ ಯೂರಿಯಾ ರಸಗೊಬ್ಬರದ ಬೇಡಿಕೆಗನುಗುಣವಾಗಿ ಪೂರೈಕೆ ಮಾಡಲು ಕೋರಿ ಕೇಂದ್ರ ಸರ್ಕಾರದ |

| | | | |
|---|---|---|---|
| | | | ರಸಗೊಬ್ಬರ ಸಚಿವರಿಗೆ ಮನವಿಯನ್ನು ಸಲ್ಲಿಸಲಾಗಿದೆ.<br>• ಬೇಡಿಕೆಗನುಗುಣವಾಗಿ ರಾಜ್ಯಕ್ಕೆ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರವನ್ನು ಸರಬರಾಜು ಮಾಡಲು ಇಲಾಖೆಯಿಂದ ಪತ್ರ ಮುಖೇನ ಕೇಂದ್ರ ಸರ್ಕಾರಕ್ಕೆ ಕೋರಲಾಗಿದೆ.<br>• ರಾಜ್ಯಾದ್ಯಂತ ದೂರದರ್ಶನ, ಕರಪತ್ರಗಳು, ದಿನಪತ್ರಿಕೆಯಲ್ಲಿ ಲೇಖನಗಳ ಮುಖಾಂತರ ಯೂರಿಯಾ ರಸಗೊಬ್ಬರದ ವಿವೇಚನಾತ್ಮಕ ಬಳಕೆ ಮತ್ತು ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ನ್ಯಾನೋ ಯೂರಿಯಾವನ್ನು ಮೇಲುಗೊಬ್ಬರವಾಗಿ ಬಳಕೆ ಮಾಡುವುದರ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br>• NFSNM (ರಾಷ್ಟ್ರೀಯ ಆಹಾರ ಭದ್ರತೆ ಮತ್ತು ಪೌಷ್ಠಿಕಾಂಶ ಅಭಿಯಾನ) ಅಭಿಯಾನದಡಿ ನ್ಯಾನೋ ಯೂರಿಯಾದ ಬಳಕೆಯನ್ನು ಉತ್ತೇಜಿಸಲು ರೈತರ ತಾಕುಗಳಲ್ಲಿ ಪ್ರಾತ್ಯಕ್ಷಿಕೆಯನ್ನು (demonstrations) ಕೈಗೊಳ್ಳಲಾಗುತ್ತಿದೆ.<br>• ಕೇಂದ್ರ ಸರ್ಕಾರದ ರಸಗೊಬ್ಬರ ಇಲಾಖೆಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ರಾಜ್ಯದ ಬೇಡಿಕೆಗನುಗುಣವಾಗಿ ಯೂರಿಯಾ ರಸಗೊಬ್ಬರದ ಪೂರೈಕೆಗೆ ಕ್ರಮವಹಿಸಲಾಗುತ್ತಿದೆ.<br>• ಪ್ರತಿದಿನ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಗೂಗಲ್ ಮೀಟ್ ಮೂಲಕ ರಸಗೊಬ್ಬರದ ಲಭ್ಯತೆ ಮತ್ತು ಬೇಡಿಕೆಯ ಬಗ್ಗೆ ಮಾಹಿತಿಯನ್ನು ಪಡೆದು, ಬೇಡಿಕೆಗನುಗುಣವಾಗಿಪೂರೈಕೆಗೆ ಕ್ರಮವಹಿಸಲಾಗುತ್ತಿದೆ.<br>• ತೀವ್ರ ಬೇಡಿಕೆಯಿರುವ ಜಿಲ್ಲೆಗಳಿಗೆ ಬೇರೆ ಜಿಲ್ಲೆಗಳಲ್ಲಿರುವ ಕಾಪು ದಾಸ್ತಾನಿನಿಂದ ಸಹಕಾರ ಸಂಘಗಳ ಮೂಲಕ ರೈತರಿಗೆ ವಿತರಿಸಲು ಕ್ರಮವಹಿಸಲಾಗುತ್ತಿದೆ.<br>**ಬಿತ್ತನೆ ಬೀಜ:**<br>• ಕೃಷಿ ಕಾರ್ಯವನ್ನು ಉತ್ತೇಜಿಸುವ ಸಲುವಾಗಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ ಬಿತ್ತನೆ ಬೀಜಗಳ ಪೂರೈಕೆ ಯೋಜನೆಯಡಿ ರಿಯಾಯಿತಿ ದರದಲ್ಲಿ ಗರಿಷ್ಠ 2 ಹೆಕ್ಟೇರ್ ಮಿತಿಯೊಳಗೆ ಬಿತ್ತನೆ ಬೀಜಗಳನ್ನು ಸರಬರಾಜು ಮಾಡಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿರುತ್ತದೆ. |

| | | |
|---|---|---|
| | | • ರಾಜ್ಯ ಸರ್ಕಾರದ ಬೀಜಗಳ ಪೂರೈಕೆ ಯೋಜನೆಯಡಿ 2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ 82.50 ಲಕ್ಷ ಹೆಕ್ಟೇರು ಪ್ರದೇಶದಲ್ಲಿ ಬಿತ್ತನೆ ಕೈಗೊಳ್ಳುವ ಗುರಿ ಇದ್ದು 4.63ಲಕ್ಷ ಕ್ವಿಂ. ಬಿತ್ತನೆ ಬೀಜಗಳ ಬೇಡಿಕೆಗೆ, 6.67 ಲಕ್ಷ ಕ್ವಿಂ. ಬಿತ್ತನೆ ಬೀಜಗಳು ಲಭ್ಯವಿರುತ್ತದೆ.<br>• ಇಲಾಖಾ ಕಾರ್ಯಕ್ರಮಗಳಡಿ ರಿಯಾಯಿತಿ ದರದಲ್ಲಿ ವಿವಿಧ ಬಿತ್ತನೆ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳು, ಹೆಚ್ಚುವರಿ ಮಾರಾಟ ಕೇಂದ್ರಗಳು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ವಿತರಣೆ ಮಾಡಲು ವ್ಯವಸ್ಥೆ ಮಾಡಲಾಗಿರುತ್ತದೆ.<br>• ಬಿತ್ತನೆ ಬೀಜ ವಿತರಣೆ ಕಾರ್ಯ ಪ್ರಗತಿಯಲ್ಲಿದ್ದು, ದಿನಾಂಕ: 18.08.2025 ರವರೆಗೆ ರೈತ ಸಂಪರ್ಕ ಕೇಂದ್ರಗಳಲ್ಲಿ 3,23,488 ಕ್ವಿಂಟಾಲ್ ಗಳಷ್ಟು ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗಿದ್ದು, 47,076ಕ್ವಿಂಟಾಲ್ ಗಳಷ್ಟು ದಾಸ್ತಾನು ರೈತ ಸಂಪರ್ಕ ಕೇಂದ್ರಗಳಲ್ಲಿ ಇರುತ್ತದೆ. ಉಳಿದ ಪ್ರಮಾಣ ಸಂಬಂಧಿಸಿದ ಸಂಸ್ಥೆಗಳಲ್ಲಿ ಲಭ್ಯವಿರುತ್ತದೆ. ಪ್ರಸ್ತುತ ಬಿತ್ತನೆ ಬೀಜದ ಪೂರೈಕೆಯಲ್ಲಿ ಯಾವುದೇ ವ್ಯತ್ಯಯ ಉಂಟಾಗಿರುವುದಿಲ್ಲ.<br>**ಪೀಡೆನಾಶಕ:**<br>ಮುಕ್ತ ಮಾರುಕಟ್ಟೆಯಲ್ಲಿ ಪೀಡೆನಾಶಕಗಳ ಕೊರತೆಯಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಆದಾಗಿಯೂ ಉತ್ತಮ ಗುಣಮಟ್ಟದ ಪೀಡೆನಾಶಕಗಳು ಕಡಿಮೆ ಬೆಲೆಯಲ್ಲಿ ರೈತರಿಗೆ ಲಭ್ಯವಾಗುವ ನಿಟ್ಟಿನಲ್ಲಿ ಅನುದಾನದ ಲಭ್ಯತೆಗೆ ಅನುಗುಣವಾಗಿ ಇಲಾಖೆಯ ವಿವಿಧ ಯೋಜನೆಗಳಡಿ ಶೇ. 50ರ ಸಹಾಯಧನದಡಿ ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನೀಕರಿಸಿ ವಿತರಿಸಲಾಗುತ್ತಿದೆ. |

ಸಂಖ್ಯೆ: AGRI/273/ACT/2025

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು